ನಿಮ್ಮಲ್ಲಿ ಯಾರಾದರೂ ಆಕಳಿಸಿದರೆ, ಅವನು ತನ್ನ ಕೈಯನ್ನು ಬಾಯಿಯ ಮೇಲೆ ಇಟ್ಟುಕೊಳ್ಳಲಿ. ಏಕೆಂದರೆ ಖಂಡಿತವಾಗಿಯೂ ಶೈತಾನನು ಪ್ರವೇಶಿಸುತ್ತಾನೆ

ಅಬೂ ಸಈದ್ ಖುದ್ರಿ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು:
ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ನಿಮ್ಮಲ್ಲಿ ಯಾರಾದರೂ ಆಕಳಿಸಿದರೆ, ಅವನು ತನ್ನ ಕೈಯನ್ನು ಬಾಯಿಯ ಮೇಲೆ ಇಟ್ಟುಕೊಳ್ಳಲಿ. ಏಕೆಂದರೆ ಖಂಡಿತವಾಗಿಯೂ ಶೈತಾನನು ಪ್ರವೇಶಿಸುತ್ತಾನೆ." [صحيح] [رواه مسلم]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ತಿಳಿಸುವುದೇನೆಂದರೆ, ಯಾರಾದರೂ ಸೋಮಾರಿತನದಿಂದ, ಹೊಟ್ಟೆ ತುಂಬಿರುವುದರಿಂದ ಅಥವಾ ಇತರ ಕಾರಣಗಳಿಂದ ಬಾಯಿಯನ್ನು ತೆರೆದು ಆಕಳಿಸುವುದಾದರೆ, ಅವನು ತನ್ನ ಕೈಯನ್ನು ಬಾಯಿಯ ಮೇಲಿಟ್ಟು ಅದನ್ನು ಮುಚ್ಚಿಕೊಳ್ಳಲಿ. ಏಕೆಂದರೆ ಅವನು ಬಾಯಿಯನ್ನು ತೆರೆದಿಟ್ಟರೆ ಶೈತಾನನು ಬಾಯೊಳಗೆ ಪ್ರವೇಶಿಸುತ್ತಾನೆ. ಕೈ ಇಟ್ಟರೆ ಅದು ಅವನು ಪ್ರವೇಶಿಸುವುದನ್ನು ತಡೆಯುತ್ತದೆ.

http://www.sunnah.global/hadeeth/kn/show/5280